ಆ) ಇದ್ದಲ್ಲಿ, ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು;

ಇ) ಇಲ್ಲದಿದ್ದಲ್ಲಿ, ಕಾರಣಗಳೇನು?

ಶ್ರೀ ರಾಮಚಂದ್ರಗೌಡ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಹೌದು.

ಆ) ಪರಿಶೀಲನೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

ಹೆರಿಗೆ ಆಸ್ಪತ್ರೆ ಮಂಜೂರು ಮಾಡುವುದು

952 (1132) ಶ್ರೀ ವಿಶ್ವನಾಥ್ ಎಸ್.ಆರ್. (ಯಲಹಂಕ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಯಲಹಂಕ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೆಸರುಘಟ್ಟ ಹೋಬಳಿ ರಾಜಾನುಕುಂಟೆ ಗ್ರಾಮದಲ್ಲಿ ಹೆರಿಗೆ ಆಸ್ಪತ್ರೆ ಮಂಜೂರು ಮಾಡುವ ವಿಚಾರ ಸರ್ಕಾರದ ಗಮನದಲ್ಲಿದೆಯೇ;

ಆ) ಹಾಗಿದ್ದಲ್ಲಿ, ಇದನ್ನು ಎಂದು ಮಂಜೂರು ಮಾಡಲಾಗುವುದು;

ಇ) ಯಲಹಂಕ ವಿಧಾನಸಭಾ ಕ್ಷೇತ್ರದಲ್ಲಿ ಎಲ್ಲೆಲ್ಲಿ ಹೆರಿಗೆ ಆಸ್ಪತ್ರೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆಗಳು ಬಂದಿರುತ್ತವೆ;

ಈ) ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಪ್ರಸ್ತುತ ರಾಜ್ಯದಲ್ಲಿ ಹೆರಿಗೆ ಆಸ್ಪತ್ರೆಗಳನ್ನು ಪ್ರತ್ಯೇಕವಾಗಿ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಯಲಹಂಕ ವಿಧಾನಸಭಾ ಕ್ಷೇತ್ರದ ಕಡಬಗೆರೆಯಲ್ಲಿ ಹೆರಿಗೆ ಕೇಂದ್ರ ಸ್ಥಾಪಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗೆ ಮನವಿ ಬಂದಿರುತ್ತದೆ.

ಈ) ಕಡಬಗೆರೆಗೆ 2 ಕಿ.ಮೀ ದೂರದ ಮಾಚೋಹಳ್ಳಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಸ್ತುತ ಕಾರ್ಯನಿರ್ವಹಿಸುತ್ತಿದೆ. ಈಗಾಗಲೇ ಮೇಲೆ ತಿಳಿಸಿದಂತೆ, ಪ್ರಸ್ತುತ ರಾಜ್ಯದಲ್ಲಿ ಹೆರಿಗೆ ಆಸ್ಪತ್ರೆಗಳನ್ನು ಪ್ರತ್ಯೇಕವಾಗಿ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲದಿರುವ ಕಾರಣ, ಇದು ಉದ್ಭವಿಸುವುದಿಲ್ಲ.

* * * * *

ಮುದ್ರಕರು: ಸರ್ಕಾರಿ ಭದ್ರತಾ ಮುದ್ರಣಾಲಯ, ಪೀಣ್ಯ, ಬೆಂಗಳೂರು.